ಕರ್ನಾಟಕ ಸರ್ಕಾರ

ಸಂಖ್ಯೆ: ಇಎನ್ 471 ಎನ್‌ಸಿಇ 2011

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 30-01-2012

ಇಂದ,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಇಂಧನ ಇಲಾಖೆ, ವಿಕಾಸಸೌಧ,
ಬೆಂಗಳೂರು.

ಗೆ,
ವ್ಯವಸ್ಥಾಪಕ ನಿರ್ದೇಶಕರು,
ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,
ನಂ. 39, "ಶಾಂತಿ ಗೃಹ" ಪ್ಯಾಲೆಸ್ ರಸ್ತೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಬಿಲ್ಡಿಂಗ್,
ಬೆಂಗಳೂರು-560001.

ಮಾನ್ಯರೇ,

ವಿಷಯ: ನವೀಕರಿಸಬಹುದಾದ ಇಂಧನ ಪ್ರಮಾಣ ಪತ್ರಗಳನ್ನು ಆಧರಿಸಿ ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಉತ್ಪಾದನಾ ಘಟಕಗಳನ್ನು ಸ್ಥಾಪಿಸುವ ಅಭಿವೃದ್ಧಿದಾರರಿಗೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಸೌಲಭ್ಯ ಪತ್ರಗಳನ್ನು ನೀಡುವ ಬಗ್ಗೆ.

ಉಲ್ಲೇಖ:
1. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗರವರ ಅಧಿಸೂಚನೆ ಸಂಖ್ಯೆ: s/03/1 ದಿನಾಂಕ : 16-03-2011.
2. ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗರವರ ಅಧಿಸೂಚನೆ ಸಂಖ್ಯೆ: y/01/10 ದಿನಾಂಕ : 1-04-2011.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತರವರ ಪತ್ರ ಸಂಖ್ಯೆ: KREDL:07:GC:20 ದಿನಾಂಕ: 15.12.2011.

*****

ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯನ್ನು ಇಂಧನ ನೀತಿಯಡಿಯಲ್ಲಿ ಯೋಜನೆಗಳನ್ನು ಸ್ಥಾಪಿಸುವಲ್ಲಿ ನೆರವಾಗಲು ಮತ್ತು ಅನುಷ್ಠಾನಗೊಳಿಸಲು ಈಗಾಗಲೇ ನೇಮಿತ ಪ್ರತಿನಿಧಿಯಾಗಿ ನಿಯೋಜಿಸಲಾಗಿರುತ್ತದೆ. ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಯೋಜನೆಯ "ನವೀಕರಿಸಬಹುದಾದ ಇಂಧನ ಪ್ರಮಾಣ ಪತ್ರ ವ್ಯವಸ್ಥೆ (RECM)" ಯಡಿಯಲ್ಲಿ ಅನುಷ್ಠಾನಗೊಳಿಸುವ ಸಲುವಾಗಿ ಯಾವುದಾದರೂ ಅಭಿವೃದ್ಧಿದಾರರು ತಮ್ಮ ಸಂಸ್ಥೆಯನ್ನು ಸಂಪರ್ಕಿಸಿದಲ್ಲಿ, ಸದರಿ ಅಭಿವೃದ್ದಿದಾರರಿಗೆ ಸರ್ಕಾರದ ಇತರೆ ಇಲಾಖೆಗಳಿಂದ ಬೇಕಾದ ಶಾಸನಬದ್ಧ ತೀರುವಳಿ (Statutory Clearance) ಪಡೆದುಕೊಳ್ಳಲು ಸೌಲಭ್ಯ ಪತ್ರಗಳನ್ನು ತಮ್ಮಿಂದ ನೀಡಬಹುದಾಗಿದೆ.

ನವೀಕರಿಸಬಹುದಾದ ಇಂಧನ ಪ್ರಮಾಣ ಪತ್ರ ವ್ಯವಸ್ಥೆ (RECM) ಯಡಿಯಲ್ಲಿ ಕರ್ನಾಟಕದಲ್ಲಿ ನವೀಕರಿಸಬಹುದಾದ ಇಂಧನ ಮೂಲಗಳಿಂದ ವಿದ್ಯುತ್ ಯೋಜನೆಗಳನ್ನು ಸ್ಥಾಪಿಸಲು ಬಯಸುವ ನವೀಕರಿಸಬಹುದಾದ ಇಂಧನ ಅಭಿವೃದ್ಧಿದಾರರು/ ಉತ್ಪಾದಕರು, ಕೇಂದ್ರ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (CERC)/ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ (KERC) ರವರು ಹೊರಡಿಸಿರುವ ಅಧಿಸೂಚನೆಗಳನ್ನು (Power Procurement from Renewable Sources by Distribution Licensee and Renewable Energy Certificate Frame Work Regulations, 2011) ಪಾಲಿಸತಕ್ಕದ್ದು, ಎಂದು ತಮ್ಮ ಸೌಲಭ್ಯ ಪತ್ರದಲ್ಲಿ ಸ್ಪಷ್ಟಪಡಿಸುವಂತೆ ತಿಳಿಸಲು ನಿರ್ದೇಶಿತನಾಗಿದ್ದೇನೆ.

ತಮ್ಮ ವಿಶ್ವಾಸಿ,

(ಹೆಚ್.ಆರ್. ನಾಗೇಂದ್ರ)
ಸರ್ಕಾರದ ಉಪ ಕಾರ್ಯದರ್ಶಿ
ಇಂಧನ ಇಲಾಖೆ.

**ಪ್ರತಿ:**

1. ವ್ಯವಸ್ಥಾಪಕ ನಿರ್ದೇಶಕರು, ಕೆಪಿಟಿಸಿಎಲ್, ಕಾವೇರಿ ಭವನ, ಬೆಂಗಳೂರು.
2. ಅಪರ ಮುಖ್ಯ ಕಾರ್ಯದರ್ಶಿರವರ, ಆಪ್ತ ಕಾರ್ಯದರ್ಶಿಗಳು, ಇಂಧನ ಇಲಾಖೆ, ವಿಕಾಸಸೌಧ ಬೆಂಗಳೂರು.